## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 97 |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 13.12.2021 |
| ಉತ್ತರಿಸಬೇಕಾದ ಸಚಿವರು | : | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು |

| ಕ್ರ. ಸಂ | ಪ್ರಶ್ನೆಗಳು | ಉತ್ತರ |
|---|---|---|
| ಅ) | ಉಡುಪಿ ಜಿಲ್ಲೆಯಲ್ಲಿ ಡಯಾಲಿಸಿಸ್ ಕೇಂದ್ರವನ್ನು ಹೊಂದಿರುವ ಸರ್ಕಾರಿ ಆಸ್ಪತ್ರೆಗಳು ಯಾವುವು; ಅವುಗಳಲ್ಲಿರುವ ಡಯಾಲಿಸಿಸ್ ಯಂತ್ರಗಳ ಸಂಖ್ಯೆ ಎಷ್ಟು; ಮಂಜೂರಾದ ವೈದ್ಯಕೀಯ ಮತ್ತು ಅರೆ ವೈದ್ಯಕೀಯ ಹುದ್ದೆಗಳು ಯಾವುವು; ಅವುಗಳ ನಿರ್ವಹಣೆಯ ಗುತ್ತಿಗೆಯನ್ನು ಪಡೆದ ಸಂಸ್ಥೆ ಯಾವುದು; ಗುತ್ತಿಗೆಯ ಅವಧಿ ಯಾವುದು; (ಗುತ್ತಿಗೆ ಕರಾರು ಪತ್ರದ ಪ್ರತಿಯನ್ನು ಒದಗಿಸುವುದು) | ಉಡುಪಿ ಜಿಲ್ಲೆಯಲ್ಲಿ ಡಯಾಲಿಸಿಸ್ ಕೇಂದ್ರವನ್ನು ಹೊಂದಿರುವ ಸರ್ಕಾರಿ ಆಸ್ಪತ್ರೆಗಳ ವಿವರ ಈ ಕೆಳಕಂಡಂತಿದೆ:<br>ಜಿಲ್ಲಾ ಆಸ್ಪತ್ರೆ, ಉಡುಪಿ.<br>ಸಾರ್ವಜನಿಕ ಆಸ್ಪತ್ರೆ, ಕಾರ್ಕಳ.<br>ಸಾರ್ವಜನಿಕ ಆಸ್ಪತ್ರೆ, ಕುಂದಾಪುರ.<br>ಈ ಆಸ್ಪತ್ರೆಗಳಲ್ಲಿ ಒಟ್ಟು 16 ಡಯಾಲಿಸಿಸ್ ಯಂತ್ರಗಳಿವೆ. ಸಾರ್ವಜನಿಕ-ಖಾಸಗಿ ಸಹಭಾಗಿತ್ವದಡಿಯಲ್ಲಿ ಡಯಾಲಿಸಿಸ್ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸುತ್ತಿದ್ದು, ಕರಾರು ಪ್ರಕಾರ ಡಯಾಲಿಸಿಸ್ ಸೇವೆಗೆ ಅವಶ್ಯವಿರುವ ವೈದ್ಯಕೀಯ ಮತ್ತು ಅರೆ ವೈದ್ಯಕೀಯ ಸಿಬ್ಬಂದಿಗಳನ್ನು ಏಜೆನ್ಸಿ ವತಿಯಿಂದ ಒದಗಿಸಲಾಗಿದೆ. ಜಿಲ್ಲೆಯಲ್ಲಿ ಡಯಾಲಿಸಿಸ್ ಕೇಂದ್ರಗಳ ನಿರ್ವಹಣೆಯನ್ನು ಬಿ.ಆರ್.ಎಸ್. ಹೆಲ್ತ್ & ರಿಸರ್ಚ್ ಇನ್‌ಸ್ಟಿಟ್ಯೂಟ್ ಪ್ರೈವೇಟ್ ಲಿಮಿಟೆಡ್, ಬೆಂಗಳೂರು ಇವರಿಗೆ ವಹಿಸಲಾಗಿದೆ. ಗುತ್ತಿಗೆಯ ಅವಧಿಯು ಮಾರ್ಚ್ 2017 ರಿಂದ ಮಾರ್ಚ್ 2022ರವರೆಗೆ ಇರುತ್ತದೆ.<br>(ಗುತ್ತಿಗೆ ಕರಾರು ಪತ್ರದ ಪ್ರತಿಯನ್ನು ಲಗತ್ತಿಸಿದೆ). |
| ಆ) | ಉಡುಪಿ ಜಿಲ್ಲೆಯಲ್ಲಿ ಸರ್ಕಾರಿ ಆಸ್ಪತ್ರೆಯಲ್ಲಿ ಡಯಾಲಿಸಿಸ್‌ನ್ನು ಪಡೆಯುತ್ತಿರುವ ರೋಗಿಗಳ ಸಂಖ್ಯೆ ಎಷ್ಟು; ಡಯಾಲಿಸಿಸ್ ಯಂತ್ರದ ಕೊರತೆಯಿಂದ ಹೆಸರು ನೋಂದಾಯಿಸಿ ಸರದಿ ಕಾಯುತ್ತಿರುವ ರೋಗಿಗಳ ಸಂಖ್ಯೆ ಎಷ್ಟು; ರೋಗಿಗಳ ಸಂಖ್ಯೆಗೆ ಅನುಗುಣವಾಗಿ ಅಗತ್ಯವಾದ ಡಯಾಲಿಸಿಸ್ ಯಂತ್ರಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ಮಾಹಿತಿಯನ್ನು ನೀಡುವುದು) | 142 .<br>ಡಯಾಲಿಸಿಸ್ ಯಂತ್ರದ ಕೊರತೆಯಿಂದ ಹೆಸರು ನೊಂದಾಯಿಸಿ ಸರದಿ ಕಾಯುತ್ತಿರುವ ರೋಗಿಗಳ ಸಂಖ್ಯೆ – 100<br>ರೋಗಿಗಳ ಸಂಖ್ಯೆಗೆ ಅನುಗುಣವಾಗಿ ಅಗತ್ಯವಾದ ಡಯಾಲಿಸಿಸ್ ಯಂತ್ರಗಳ ಸಂಖ್ಯೆ - 26 |
| ಇ) | ಕುಂದಾಪುರ ತಾಲ್ಲೂಕು ಆಸ್ಪತ್ರೆಯಲ್ಲಿರುವ ಡಯಾಲಿಸಿಸ್ ಯಂತ್ರಗಳ ಸಂಖ್ಯೆ ಎಷ್ಟು; ಅವುಗಳಲ್ಲಿ ಸುಸ್ಥಿತಿಯಲ್ಲಿರುವ ಯಂತ್ರಗಳ ಸಂಖ್ಯೆ ಎಷ್ಟು; ಕಾರ್ಯನಿರ್ವಹಿಸುತ್ತಿರುವ | ಕುಂದಾಪುರ ತಾಲ್ಲೂಕು ಆಸ್ಪತ್ರೆಯಲ್ಲಿ 05 ಡಯಾಲಿಸಿಸ್ ಯಂತ್ರಗಳು ಇದ್ದು, ಇದರಲ್ಲಿ 03 ಯಂತ್ರಗಳು ಸುಸ್ಥಿತಿಯಲ್ಲಿರುತ್ತವೆ. ಸದರಿ ಆಸ್ಪತ್ರೆಯಲ್ಲಿ ಈ ಕೆಳಕಂಡಂತೆ ಒಟ್ಟು 06 ಸಿಬ್ಬಂದಿಗಳು ಕಾರ್ಯನಿರ್ವಹಿಸುತ್ತಿದ್ದಾರೆ. |

2...

| | | |
|---|---|---|
| | ಸಿಬ್ಬಂದಿಗಳ ಹುದ್ದೆ ಮತ್ತು ಸಂಖ್ಯೆ ಎಷ್ಟು; ಸರ್ಕಾರದಿಂದ ಬಿಡುಗಡೆಗೆ ಬಾಕಿಯಾಗಿರುವ ಅನುದಾನವೆಷ್ಟು; ಯಾವಾಗ ಬಿಡುಗಡೆ ಮಾಡಲಾಗುವುದು; | ಡಯಾಲಿಸಿಸ್ ಟೆಕ್ನಿಷಿಯನ್ - 02<br>ಶುಶ್ರೂಷಕಿಯರು - 03<br>ಗ್ರೂಪ್ "ಡಿ" – 01<br><br>ಸರ್ಕಾರದಿಂದ ಯಾವುದೇ ಅನುದಾನ ಬಿಡುಗಡೆಗೆ ಬಾಕಿ ಇರುವುದಿಲ್ಲ. |
| ಊ | ಗುತ್ತಿಗೆಯನ್ನು ಪಡೆದ ಏಜೆನ್ಸಿಯವರು ಡಯಾಲಿಸಿಸ್ ಕೇಂದ್ರುವನ್ನು ಕರಾರಿನಂತೆ ನಿರ್ವಹಣೆ ಮಾಡದೇ ಇರುವುದರಿಂದ ಯಂತ್ರುಗಳು ಹಾಳಾಗಿರುವುದು ಮತ್ತು ಸಿಬ್ಬಂದಿ ಕೊರತೆಯನ್ನು ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಪೂರ್ಣ ಪ್ರಮಾಣದಲ್ಲಿ ಡಯಾಲಿಸಿಸ್ ಕೇಂದ್ರುಗಳು ಕಾರ್ಯ ನಿರ್ವಹಣೆಗೆ ಸರ್ಕಾರದ ಕ್ರಮವೇನು ? | ಹೌದು.<br>ಆಗಸ್ಟ 2021ರಿಂದ ಉಡುಪಿ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಡಯಾಲಿಸಿಸ್ ಸಿಬ್ಬಂದಿಗಳಿಗೆ ಸರ್ಕಾರದ ವತಿಯಿಂದ ಗೌರವಧನ ನೀಡಲಾಗುತ್ತಿದೆ ಹಾಗೂ ಡಯಾಲಿಸಿಸ್ ಪರಿಕರಗಳಿಗೆ ಅನುದಾನವನ್ನು ಬಿಡುಗಡೆ ಮಾಡಲಾಗಿದ್ದು, ಪೂರ್ಣ ಪ್ರಮಾಣದಲ್ಲಿ ಡಯಾಲಿಸಿಸ್ ಕೇಂದ್ರುಗಳು ಕಾರ್ಯ ನಿರ್ವಹಿಸಲು ಹಾಗೂ ಡಯಾಲಿಸಿಸ್ ಯಂತ್ರುಗಳನ್ನು ದುರಸ್ತಿಗೊಳಿಸಲು ಈಗಾಗಲೇ ಕ್ರಮವಹಿಸಲಾಗಿದೆ. |

**ಸಂಖ್ಯೆ: ಆಕುಕ 85 ಎಸ್.ಟಿ.ಕ್ಯೂ 2021**

**(ಡಾ|| ಕೆ.ಸುಧಾಕರ್)**
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ
ವೈದ್ಯಕೀಯ ಶಿಕ್ಷಣ ಸಚಿವರು.